ಕಾರಣವಾಗಿರುತ್ತದೆ. ಆದರೆ ಹಿಂಗಾರು ಮತ್ತು ಬೇಸಿಗೆ ಹಂಗಾಮಿನಲ್ಲಿ ಈ ಪರಿಸ್ಥಿತಿಯ ಸ್ವಲ್ಪ ಸುಧಾರಿಸುದುರಿಂದಲೂ ಹಾಗೂ ಇಲಾಖೆಯ ತೀವ್ರಕರ ಕೃಷಿ ಕಾರ್ಯಕ್ರಮಗಳನ ಹಮ್ಮಿಕೊಂಡಿದುದರ ಪರಿಣಾಮವಾಗಿಯೂ ಉತ್ಪಾದನೆಯು ಸ್ವಲ್ಪ ಮಟ್ಟಿಗೆ ಸುಧಾರಿಸಲ್ಪಟ್ಟಿರುತ್ತದ

ಕಾರ್ಮಿಕ ನ್ಯಾಯಾಲಯದ ಮೊಕದ್ದಮೆಗಳು

135 - ಶ್ರೀ ಸುರೇಶ್ ಕುಮಾರ್ (ರಾಜಾಜಿನಗರ) : ಮಾನ್ಯ ಕಾರ್ಮಿಕ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದ ಕಾರ್ಮಿಕ ನ್ಯಾಯಾಲಯಗಳ ಮುಂದಿರುವ ಮೊಕದ್ದಮೆಗಳು ಎಷ್ಟು ಅವುಗಳನ್ನು ಶೀಘ್ರ ಇತ್ಯರ್ಥ ಪಡಿಸಲು ತೆಗೆದುಕೊಂಡಿರುವ ಕ್ರಮಗಳೇನು?

ಶ್ರೀ ಸಿ. ಗುರುನಾಥ್ (ಕಾರ್ಮಿಕ ಸಚಿವರು) :

ಅ) 15586 ಮೊಕದ್ದಮೆಗಳು ರಾಜ್ಯದ ಕಾರ್ಮಿಕ ನ್ಯಾಯಾಲಯಗಳ ಮುಂದೆ 1995ರ ಡಿಸೆಂಬರ್ ಅಂತ್ಯಕ್ಕೆ ಬಾಕಿ ಇರುತ್ತವೆ. ಈ ಮೊಕ್ಕದ್ದಮೆಗಳನ್ನು ಹಿರಿಯ ನ್ಯಾಯಾಧೀಶರು ನ್ಯಾಯಾಲಯಗಳಲ್ಲಿ ಸುವ್ಯವಸ್ಥಿತವಾಗಿ ಪರೀಕ್ಷಿಸುತ್ತಿದ್ದು ಅವರು ಇವುಗಳನ್ನು ತ್ವರಿತವಾಗಿ ಇತ್ಯರ್ಥಗೊಳಿಸಲು ಎಲ್ಲಾ ಪ್ರಯತ್ನಗಳನ್ನು ಮಾಡುತ್ತಿದ್ದಾರೆ

ಕೃಷಿ ವ್ಯವಸಾಯೋತ್ಪನ್ನಗಳ ಮಾರುಕಟ್ಟೆ ಸಮಿತಿಗಳಿಗೆ ಚುನಾವಣೆ

2 - ಶ್ರೀ ಹೆಚ್. ಶಿವಪ್ಪ (ಹರಿಹರ) : ಮಾನ್ಯ ಕೃಷಿ ಮಾರುಕಟ್ಟೆ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕರ್ನಾಟಕ ರಾಜ್ಯದಲ್ಲಿ ಕೃಷಿ ವ್ಯವಸಾಯೋತ್ಪನ್ನ ಮಾರುಕಟ್ಟೆ ಸಮಿತಿಗಳಿಗೆ ಚುನಾವಣೆ ನಡೆಯದೆ ಇದ್ದು, ಚುನಾಯಿತ ಪ್ರತಿನಿಧಿಗಳಿಲ್ಲದೆ ಕೇವಲ ಆಡಳಿತಾಧಿಕಾರಿಗಳು ಆಡಳಿತವನ್ನು ನಡೆಸುತ್ತಿರುವುದರಿಂದ ಆಡಳಿತ ಯಂತ್ರ ಕುಸಿದಿದ್ದು, ರೈತರಿಗೆ ಸರಿಯಾದ ಸೌಲಭ್ಯಗಳು ದೊರೆಯದೆ ಇರುವುದರಿಂದ ರೈತರು ಕಷ್ಟ ಮತ್ತು ನಷ್ಟವನ್ನು ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಆದ್ದರಿಂದ ಈ ಪರಿಸ್ಥಿತಿಯನ್ನು ಪರಿಹರಿಸಲು ಚುನಾವಣೆಗಳು ನಡೆಯುವ ತನಕ ಆಡಳಿತಾಧಿಕಾರಿಗಳಿಗೆ ಸಲಹೆ, ಸೂಚನೆ ನೀಡುವ ಉದ್ದೇಶದಿಂದ ಸಲಹಾ ಸಮಿತಿ ಏನಾದರೂ ರಚಿಸುವ ಯೋಚನೆ ಸರ್ಕಾರಕ್ಕಿದೆಯೇ?

ಇ) ಆ ರೀತಿ ಸಲಹಾ ಸಮಿತಿ ರಚಿಸುವುದರಿಂದ ಸರ್ಕಾರಕ್ಕೆ ಏನಾದರೂ ನಷ್ಟ ಆಗುವುದೇ?

ಶ್ರೀ ಬಿ.ಬಿ. ಶಿವಪ್ಪ (ಕೃಷಿ ಮಾರುಕಟ್ಟೆ ರಾಜ್ಯ ಸಚಿವರು) :

ಅ) ಬಂದಿಲ್ಲ

ಆ) ಇಲ್ಲ

ಇ) ಉದ್ಭವಿಸುವುದಿಲ್ಲ

ರಾಜ್ಯದ ಗ್ರಾಮೀಣ ಪ್ರದೇಶಗಳಲ್ಲಿ ರುದ್ರಭೂಮಿ ವ್ಯವಸ್ಥೆ

44 - ಶ್ರೀ ಹೆಚ್. ಶಿವಪ್ಪ (ಹರಿಹರ) : ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದ ಬಹುತೇಕ ಗ್ರಾಮಗಳಲ್ಲಿ ಪ್ರತ್ಯೇಕ ಜನಾಂಗದವರಿಗೆ ರುದ್ರಭೂಮಿಯ ಉದ್ದೇಶಕ್ಕಾಗಿ ಭೂಮಿಯ ಉಪಲಬ್ಧವಾಗದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ ರುದ್ರ ಭೂಮಿಯ ಉದ್ದೇಶಕ್ಕಾಗಿ ಸ್ಥಳವನ್ನು ಕಾಯ್ದಿರಿಸಲು ಸರ್ಕಾರವು ತೆಗೆದುಕೊಳ್ಳುವ ಕ್ರಮಗಳೇನು?

ಶ್ರೀ ಆರ್.ಎಲ್. ಜಾಲಪ್ಪ (ಕಂದಾಯ ಸಚಿವರು) :